ಕರ್ನಾಟಕ ವಿಧಾನ ಪರಿಷತ್ತು

ಸದಸ್ಯರ ಹೆಸರು	:	ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	569.
ಉತ್ತರಿಸುವ ಸಚಿವರು	:	ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು
ಉತ್ತರಿಸಬೇಕಾದ ದಿನಾಂಕ	:	11.12.2020

ಕ್ರ.ಸಂ.	ಪ್ರಶ್ನೆ	ಉತ್ತರ
(ಅ)	ಕೋವಿಡ್-19ರ ಹಿನ್ನೆಲೆಯಲ್ಲಿ ಲಾಕ್ ಡೌನ್ ವಿಧಿಸಿದ ಪ್ರಯುಕ್ತ ಸಂಕಷ್ಟ ದಲ್ಲಿರುವ ಕೈಮಗ್ಗ ನೇಕಾರಿಕೆ ಹಾಗೂ ಇತರೆ ಕೈಮಗ್ಗ ಚಟುವಟಿಕೆ ಗಳನ್ನು ನಡೆಸುವ ನೇಕಾರರಿಗೆ "ನೇಕಾರರ ಸಮ್ಮಾನ್" ಯೋಜನೆಯಡಿ ವಾರ್ಷಿಕ ರೂ.2,000/- ಹಣ ನೀಡುವು ದಾಗಿ ಘೋಷಿಸಿದ್ದು, ಫಲಾನುಭವಿ ಗಳ ಖಾತೆಗೆ ಹಣ ಜಮೆ ಆಗಿದೆಯೇ;	ಕೋವಿಡ್-19 ಹಿನ್ನೆಲೆಯಲ್ಲಿ ಲಾಕ್ ಡೌನ್ ವಿಧಿಸಿರುವ ಪ್ರಯುಕ್ತ ಸಂಕಷ್ಟದಲ್ಲಿರುವ ಕೈಮಗ್ಗ ನೇಕಾರಿಕೆ ಹಾಗೂ ಇತರೆ ಕೈಮಗ್ಗ ಚಟುವಟಿಕೆಗಳನ್ನು ನಡೆಸುವ ನೇಕಾರರಿಗೆ "ನೇಕಾರ ಸಮ್ಮಾನ್" ಯೋಜನೆಯಡಿ ವಾರ್ಷಿಕ ರೂ.2,000/-ಗಳ ಪರಿಹಾರಧನ ನೀಡುವುದಾಗಿ ಘೋಷಿಸಿದ್ದು, ಸದರಿ ಯೋಜನೆಯಡಿ ರಾಜ್ಯದಲ್ಲಿ ಈವರೆವಿಗೆ 50,511 ಕೈಮಗ್ಗ ನೇಕಾರರ ಅರ್ಜಿಗಳನ್ನು ಸೇವಾ ಸಿಂಧು ತಂತ್ರಾಂಶದಲ್ಲಿ ನೋಂದಾಯಿಸಿದ್ದು, ಇದರಲ್ಲಿ 46,259 ಕೈಮಗ್ಗ ನೇಕಾರ ಫಲಾನುಭವಿಗಳಿಗೆ ನೇರ ನಗದು ವರ್ಗಾವಣೆ (ಡಿ.ಬಿ.ಟಿ) ಮುಖಾಂತರ ಹಣ ಜಮೆ ಮಾಡಲಾಗಿದೆ.
(ಆ)	ಬೆಳಗಾವಿ ಜಿಲ್ಲೆಯಲ್ಲಿ ಒಟ್ಟು ಇರುವ ಕೈಮಗ್ಗ ನೇಕಾರಿಕೆ ಹಾಗೂ ಇತರೆ ಕೈಮಗ್ಗ ಚಟುವಟಿಕೆ ಗಳನ್ನು ನಡೆಸುವ ನೇಕಾರರ ಸಂಖ್ಯೆ ಎಷ್ಟು;	4ನೇ ಕೈಮಗ್ಗ ಗಣತಿಯ ಪ್ರಕಾರ ಬೆಳಗಾವಿ ಜಿಲ್ಲೆಯಲ್ಲಿ ಕೈಮಗ್ಗ ನೇಕಾರಿಕೆ ಹಾಗೂ ಇತರೆ ಕೈಮಗ್ಗ ಚಟುವಟಿಕೆಗಳಲ್ಲಿ 5,353 ನೇಕಾರರು ತೊಡಗಿದ್ದು, ಇದರಲ್ಲಿ ಕೈಮಗ್ಗ ನೇಕಾರಿಕೆ ನಡೆಸುವ ನೇಕಾರರ ಸಂಖ್ಯೆ:1,751 ಹಾಗೂ ಇತರೆ ಕೈಮಗ್ಗ ಚಟುವಟಿಕೆಗಳನ್ನು ನಡೆಸುವ ನೇಕಾರರ ಸಂಖ್ಯೆ:3,602 ಆಗಿರುತ್ತದೆ.
(ಇ)	ಪರಿಹಾರದ ಮೊತ್ತ ಇನ್ನೂ ತಲುಪಿಲ್ಲವೆಂಬ ಕೂಗು ಕೇಳಿಬರುತ್ತಿರು ವುದು ನಿಜವೇ; ಹಾಗಿದ್ದಲ್ಲಿ, ಇದನ್ನು ಪರಿಹರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?	"ನೇಕಾರ ಸಮ್ಮಾನ್" ಯೋಜನೆಯಡಿ ಬೆಳಗಾವಿ ಜಿಲ್ಲೆಯಲ್ಲಿ 5,293 ನೇಕಾರರನ್ನು ಪರಿಹಾರಧನಕ್ಕಾಗಿ ನೋಂದಾಯಿಸಲಾಗಿದ್ದು, ಅದರಲ್ಲಿ ಈವರೆವಿಗೆ 4,382 ನೇಕಾರರಿಗೆ ಡಿ.ಬಿ.ಟಿ ಮೂಲಕ ಸಹಾಯಧನ ನೀಡಲಾಗಿರುತ್ತದೆ. ಇನ್ನುಳಿದ 911 ನೇಕಾರರ ಆಧಾರ ಸಂಖ್ಯೆಯೊಂದಿಗೆ ಬ್ಯಾಂಕ್ ಖಾತೆಯು ಎನ್.ಪಿ.ಸಿ.ಐ.ಗೆ ಜೋಡಣೆಯ ಪ್ರಕ್ರಿಯೆ ಚಾಲ್ತಿಯಲ್ಲಿದ್ದು, ಈ ಪ್ರಕ್ರಿಯೆ ಮುಗಿದ ತಕ್ಷಣ ಅರ್ಹ ನೇಕಾರರಿಗೆ ಯೋಜನೆಯ ಪರಿಹಾರಧನ ಜಮೆ ಆಗಲಿದೆ.

ಸಂ: ವಾಕೈ 259 JAKE 2020

(ಶ್ರೀಮಂತ ಬಾಳಾಸಾಹೇಬ ಪಾಟೀಲ್)
ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು